1810752

ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ/103/ಎಂಎನ್‌ಎಂಯು/2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 28-10-2021

ಇವರಿಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ),
ಬಹುಮಡಿಗಳ ಕಟ್ಟಡ, ಬೆಂಗಳೂರು.

ಇವರಿಗೆ,

ನೋಂದಣಿ ಮಹಾಪರಿವೀಕ್ಷಕರು
ಹಾಗೂ ಮುದ್ರಾಂಕಗಳ ಆಯುಕ್ತರು,
ಕಂದಾಯ ಭವನ, 8 ನೇ ಮಹಡಿ,
ಬೆಂಗಳೂರು.

ಮಾನ್ಯರೆ,

ವಿಷಯ: ಪಕ್ಷಕಾರರ ಮೊಬೈಲ್ ಸಂಖ್ಯೆಗೆ One Time Password ಕಳುಹಿಸಿ, ದಸ್ತಾವೇಜುಗಳನ್ನು ನೋಂದಾಯಿಸುತ್ತಿರುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: Comp/60/2003-04 ದಿನಾಂಕ: 04-10-2021.

* * *

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದತ್ತ ತಮ್ಮ ಗಮನ ಸೆಳೆಯಲಾಗಿದೆ. ಸದರಿ ಪತ್ರವನ್ನು ಪರಿಶೀಲಿಸಲಾಗಿ, 2021-22 ನೇ ಸಾಲಿನಲ್ಲಿ ಕಳೆದ 04 ತಿಂಗಳಿನಲ್ಲಿ OTP ಸೇವೆಯಲ್ಲಿ ವ್ಯತ್ಯಯವಾಗಿ ನೋಂದಣಿ ಪ್ರಕ್ರಿಯೆಗೆ ಅಡಚಣೆಯಾಗಿರುವ ವಿವರ: ಜೂನ್- 07, 16, 21 & 22, ಜುಲೈ- 05, 06, 13, 16, 17, 19, 22 & 28, ಆಗಸ್ಟ್-04, 05, 06, 11, 17, 21, 24 & 27 ಮತ್ತು ಸೆಪ್ಟೆಂಬರ್-08 ಅಂದರೆ, ಕಳೆದ 04 ತಿಂಗಳಲ್ಲಿ ಸುಮಾರು 21 ದಿನಗಳಲ್ಲಿ OTP ಸೇವೆಯಲ್ಲಿ ವ್ಯತ್ಯಯ ಉಂಟಾಗಿರುವುದರಿಂದ ನೋಂದಣಿ ಪ್ರಕ್ರಿಯೆಯಲ್ಲಿ ಅಡಚಣೆಯಾಗಿ ಸಾರ್ವಜನಿಕರಿಗೆ ತೊಂದರೆಯಾಗಿರುತ್ತದೆ. ಅದರಂತೆ, ಒಂದೇ ಮೊಬೈಲ್ ಸಂಖ್ಯೆಯನ್ನು ಬಹಳಷ್ಟು ದಸ್ತಾವೇಜುಗಳ ನೋಂದಣಿ ಸಮಯದಲ್ಲಿ ಉಪಯೋಗಿಸಿರುವುದು ಸಹ ಕಂಡು ಬಂದಿರುವ ಹಿನ್ನೆಲೆಯಲ್ಲಿ ದಸ್ತಾವೇಜುಗಳ ನೋಂದಣಿ ಸಮಯದಲ್ಲಿ ಪಕ್ಷಕಾರರು ತಮ್ಮ ಮೊಬೈಲ್ ಸಂಖ್ಯೆಯನ್ನೇ ನೀಡಿರುವರೇ ಎಂದು ಖಚಿತಪಡಿಸಿಕೊಳ್ಳಲು ಸಾಧ್ಯವಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಮೊಬೈಲ್ ಸಂಖ್ಯೆಯ OTP Validation ನಿಂದ ಯಾವುದೇ ಉದ್ದೇಶ ಈಡೇರಿರುವುದಿಲ್ಲ.

ಮೇಲೆ ವಿವರಿಸಿರುವ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, ತಾವು ಕೋರಿರುವಂತೆ, OTP ಸಮಸ್ಯೆಯಿಂದಾಗಿ ದಸ್ತಾವೇಜುಗಳ ನೋಂದಣಿ ವಿಳಂಬವಾಗಿ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದರಿಂದ, ದಸ್ತಾವೇಜಿನ ನೋಂದಣಿ ಸಮಯದಲ್ಲಿ ಪಕ್ಷಕಾರರಿಗೆ ಮಾಹಿತಿ ನೀಡುವ ಉದ್ದೇಶದಿಂದ ಮೊಬೈಲ್ ಸಂಖ್ಯೆಯನ್ನು ಪಡೆಯುತ್ತಿರುವ ವ್ಯವಸ್ಥೆಯನ್ನು ಮುಂದುವರೆಸಲು ಹಾಗೂ ಮೊಬೈಲ್ ಸಂಖ್ಯೆಯನ್ನು ಖಚಿತಪಡಿಸಿಕೊಳ್ಳಲು OTP ಕಳುಹಿಸುತ್ತಿರುವ ವ್ಯವಸ್ಥೆಯನ್ನು ಕೈಬಿಡಲು ಅನುಮತಿ ನೀಡಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಕೆ.ಸಿ.ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ
(ನೋಂದಣಿ ಮತ್ತು ಮುದ್ರಾಂಕ)